ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ - 42 : ಹಿಂದುಳಿದ ಪ್ರದೇಶಗಳ ಅಭಿವೃದ್ಧಿ ಇತ್ಯಾದಿ

ಶ್ರೀ ಕೆ. ವೆಂಕಟೇಶ (ಪ್ರದೇಶಾಭಿವೃದ್ಧಿ ಮತ್ತು ಕಾಡಾ ರಾಜ್ಯ ಸಚಿವರು) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಹಿಂದುಳಿದ ಪ್ರದೇಶಗಳ ಅಭಿವೃದ್ಧಿ ಇತ್ಯಾದಿಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 93,98,00,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ನಾನು ಕೋರುತ್ತೇನೆ.

ಬೇಡಿಕೆ ಸಂಖ್ಯೆ - 60 : ಮಲೆನಾಡು ಪ್ರದೇಶ ಅಭಿವೃದ್ಧಿ

ಶ್ರೀ ಕೆ. ವೆಂಕಟೇಶ (ಪ್ರದೇಶಾಭಿವೃದ್ಧಿ ಮತ್ತು ಕಾಡಾ ಸಚಿವರು) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಮಲೆನಾಡು ಪ್ರದೇಶ ಅಭಿವೃದ್ಧಿ"ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ30,00,00,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

(ಎಲ್ಲಾ ಪ್ರಸ್ತಾಪಗಳನ್ನೂ ಮಂಡಿಸಲಾಯಿತು.)

ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳು

ಸಿ.ಇ.ಟಿ. ಬಗ್ಗೆ

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ವಿರೋಧ ಪಕ್ಷದ ನಾಯಕರು) ಅದಕ್ಕಿಂತಲೂ ಮುಂಚೆ ಈ ಸಿ.ಇ.ಟಿ. ಬಗ್ಗೆ ತೆಗೆದುಕೊಳ್ಳುತ್ತೀರೇನು?

ಅಧ್ಯಕ್ಷರು : ಹಾಗಾದರೆ ಚರ್ಚೆಯನ್ನು ನಾಳೆ ತೆಗೆದುಕೊಳ್ಳೋಣಾ? ಚರ್ಚೆಯನ್ನು ನಾಳೆ ಮಾಡುತ್ತೀರಾ? ನಿಯಮ 69ರ ಮೇರೆಗೆ ಸಾರ್ವಜನಿಕರ ಮಹತ್ವ ಜರೂರು ವಿಷಯದ ಬಗ್ಗೆ ಅಲ್ಪಕಾಲಾವಧಿ ಚರ್ಚೆ ಇದೆ .....

ಬೆಂಗಳೂರು ಮಹಾನಗರ ಪಾಲಿಕೆಯ ಮಹಾಪೌರರು ರಾಜೀನಾಮೆ ನೀಡಿದ್ದಾರೆಂಬ ಸುದ್ದಿ ಬಗ್ಗೆ

ಶ್ರೀ ಎಸ್. ಸುರೇಶ್‌ಕುಮಾರ್ (ರಾಜಾಜಿನಗರ) : ಅಧ್ಯಕ್ಷರೆ, ಒಂದು ನಿಮಿಷ ಮುಖ್ಯ ಮಂತ್ರಿಗಳು ಇದ್ದಾರೆ, ಬೆಳಿಗ್ಗೆ ಒಂದು ದೊಡ್ಡ ಕಾರ್ಯಕ್ರಮ ಇತ್ತು ಅದು ರದ್ದಾಯಿತು. ಬೆಂಗಳೂರಿನ ಮಹಾಪೌರರು ರಾಜೀನಾಮೆ ಕೊಟ್ಟಿದ್ದಾರೆಂದು ದಟ್ಟವಾಗಿ ಸುದ್ದಿ ಹರಡಿದೆ. ಮುಖ್ಯ ಮಂತ್ರಿಗಳು